ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

ಭಾಗ – ೫ Part – V	ಬೆಂಗಳೂರು, ಶನಿವಾರ, ೦೫, ಸೆಪ್ಟೆಂಬರ್, ೨೦೨೬ (ಭಾದ್ರಪದ ೧೪, ಶಕವರ್ಷ, ೧೯೪೮) BENGALURU, SATURDAY, 05 SEPTEMBER, 2026 (BHADRAPADA 14, SHAKAVARSHA, 1948)	ನಂ. ೯೦೮ No. 908

ಕರ್ನಾಟಕ ಸರ್ಕಾರ
ಶಾಲಾ ಶಿಕ್ಷಣ ಇಲಾಖೆ
ಆಯ್ಕೆ ಪ್ರಾಧಿಕಾರಿ ಹಾಗೂ ವಿಭಾಗೀಯ ಸಹನಿರ್ದೇಶಕರು, ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿ, ಬೆಳಗಾವಿ ವಿಭಾಗ, ಬೆಳಗಾವಿ.

ಸಂಖ್ಯೆ: ಸನಿಕ/ಇ1/ಪ್ರೌ.ಶಾ.ಶಿ.ನೇ/ವಿವ-10/2026-27 **ದಿನಾಂಕ: 05-09-2026**

ಸೇರ್ಪಡೆ ಅಧಿಸೂಚನೆ

2026-27ನೇ ಸಾಲಿನಲ್ಲಿ ಶಾಲಾ ಶಿಕ್ಷಣ ಇಲಾಖೆಯ ಬೆಳಗಾವಿ ವಿಭಾಗದ ವ್ಯಾಪ್ತಿಯ ಸರ್ಕಾರಿ ಪ್ರೌಢ ಶಾಲೆಗಳಲ್ಲಿಖಾಲಿ ಇರುವ ಪ್ರೌಢ ಶಾಲಾ ಸಹ ಶಿಕ್ಷಕರು (ಕನ್ನಡ ಭಾಷೆ, ಆಂಗ್ಲ ಭಾಷೆ, ಕಲಾ (ಕನ್ನಡ/ಇಂಗ್ಲೀಷ್ ಮಾಧ್ಯಮ) ಜೀವ ವಿಜ್ಞಾನ (ಕನ್ನಡ /ಇಂಗ್ಲೀಷ್ ಮಾಧ್ಯಮ) ಹಾಗೂ ದೈಹಿಕ ಶಿಕ್ಷಣ ಶಿಕ್ಷಕರು(ಗ್ರೇಡ್-I) ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ದಿನಾಂಕ: 04.09.2026 ರಂದು ಕರ್ನಾಟಕ ರಾಜ್ಯ ಪತ್ರದಲ್ಲಿ ಹೊರಡಿಸಲಾದ **ಸೇರ್ಪಡೆ ಅಧಿಸೂಚನೆಯನ್ನು** ಹಿಂಪಡೆಯಲಾಗಿದೆ. ದಿನಾಂಕ:11.08.2026ರಂದು ಹೊರಡಿಸಲಾದ ಸಂಬಂಧಪಟ್ಟ ಅಧಿಸೂಚನೆಗೆ ಈ ಕೆಳಕಂಡ ಅಂಶಗಳನ್ನು ಸೇರ್ಪಡೆಗೊಳಿಸಲಾಗಿದೆ. ಅದರಂತೆ ಓದಿಕೊಳ್ಳತಕ್ಕದ್ದು.

ಅಧಿಸೂಚನೆಯಲ್ಲಿರುವುದು	ಸೇರ್ಪಡೆಯಂತೆ ಓದಿಕೊಳ್ಳತಕ್ಕದ್ದು
ಅಧಿಸೂಚನೆ ಪುಟ ಸಂಖ್ಯೆ: 09 ರ ಕಂಡಿಕೆ:12 ರ **ಮೀಸಲಾತಿ:ಉಪಕಂಡಿಕೆ (A)ರಲ್ಲಿ ಜಾತಿ ಮೀಸಲಾತಿ ಪ್ರಮಾಣ ಪತ್ರಗಳನ್ನು**ಸಲ್ಲಿಸುವ ಸಂಬಂಧಮಾಹಿತಿ ನೀಡಿರುವ ಕೋಷ್ಟಕದ **ಕ್ರ.ಸಂ.03 ರಲ್ಲಿ "ಪ್ರವರ್ಗ–II(a), II(b), III(a) ಮತ್ತು III(b)ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ನಮೂನೆ-ಎಫ್ ರಲ್ಲಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಸಲ್ಲಿಸಲು ತಿಳಿಸಲಾಗಿದೆ".**	ಸರ್ಕಾರದ ಆದೇಶ ಸಂಖ್ಯೆ: ಹಿಂವಕ 232 ಬಿಸಿಎ 2026 ಬೆಂಗಳೂರು, ದಿನಾಂಕ :01/09/2026 ರಲ್ಲಿ ರಾಜ್ಯ ಸರ್ಕಾರದ ವ್ಯಾಪ್ತಿಗೆ ಬರುವ ಉದ್ಯೋಗದ ಮೀಸಲಾತಿಗಾಗಿ ನೇರ ನೇಮಕಾತಿ ಸಂದರ್ಭದಲ್ಲಿ ವಿವಾಹಿತ ಮಹಿಳೆ /ಪುರುಷ ಅಭ್ಯರ್ಥಿಗಳ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ನೀಡುವ ಸಂದರ್ಭದಲ್ಲಿ ಈ ಕೆಳಕಂಡ ಅಂಶಗಳನ್ನು ಪರಿಗಣಿಸಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ವಿತರಿಸಲು ಆದೇಶಿಸಲಾಗಿರುತ್ತದೆ. ಸದರಿ ಸರ್ಕಾರದ ಆದೇಶದ ಹಿನ್ನೆಲೆಯಲ್ಲಿ ಈ ಕೆಳಕಂಡಂತೆ ಓದಿಕೊಳ್ಳತಕ್ಕದ್ದು. **"ವಿವಾಹಿತ ಮಹಿಳಾ/ಪುರುಷ ಅರ್ಜಿದಾರಳ/ನ ಉತ್ಪನ್ನಕ್ಕೆ ಅವಳ/ಅವನ ತಂದೆ ತಾಯಿಗಳ ಉತ್ಪನ್ನ ಸೇರಿಸಬಾರದು. ಅಂಥ ಪ್ರಕರಣಗಳಲ್ಲಿ ಪತಿ ಪತ್ನಿಯರು ಒಂದು ಸ್ವಾಯತ್ತ ಕುಟುಂಬದಂತೆ ಪ್ರತ್ಯೇಕವಾಗಿ ವಾಸಿಸುತ್ತಿದ್ದಲ್ಲಿ ಅರ್ಜಿದಾರಳ/ನ ಉತ್ಪನ್ನಕ್ಕೆ ಅವಳ/ಅವನ ಪತಿ/ಪತ್ನಿಯ ಉತ್ಪನ್ನವನ್ನು ಸೇರಿಸಬೇಕು. ಅವರು ಅವಿಭಕ್ತ ಕುಟುಂಬದ ಅಂಗವಾಗಿ ವಾಸಿಸುತ್ತಿದ್ದರೆ, ಅರ್ಜಿದಾರಳ /ನ ಉತ್ಪನ್ನ ಮತ್ತು ಅವಿಭಕ್ತ ಕುಟುಂಬದ ಉತ್ಪನ್ನವನ್ನು ಒಟ್ಟಿಗೆ ಸೇರಿಸಿ ಕುಟುಂಬದ ಉತ್ಪನ್ನವನ್ನು ಕಂಡುಹಿಡಿಯಬೇಕು."**

	ಅದರಂತೆ, ಇತರೆ ಹಿಂದುಳಿದ ವರ್ಗಗಳಾದ, ಪ್ರವರ್ಗ–II(a), II(b), III(a), ಮತ್ತು III(b) ವರ್ಗಗಳಿಗೆ ಸೇರಿದ ವಿವಾಹಿತ ಮಹಿಳಾ/ಪುರುಷ ಅಭ್ಯರ್ಥಿಗಳು ಜಾತಿ ಮತ್ತು ಆದಾಯ ಪ್ರಮಾಣ ಪತ್ರವನ್ನು **ನಮೂನೆ-ಎಫ್** ರಲ್ಲಿ ಪಡೆದು ಸದರಿ ನೇಮಕಾತಿಯ ಅರ್ಜಿಯೊಂದಿಗೆ ಲಗತ್ತಿಸಿ, ಸಲ್ಲಿಸುವುದು. ಅದರಂತೆ ಓದಿಕೊಳ್ಳತಕ್ಕದ್ದು. ಇತರೆ ಹಿಂದುಳಿದ ವರ್ಗಗಳಾದ, ಪ್ರವರ್ಗ–II(a), II(b), III(a), ಮತ್ತು III(b) ವರ್ಗಗಳಿಗೆ ಸೇರಿದ ವಿವಾಹಿತ ಮಹಿಳಾ/ಪುರುಷ ಅಭ್ಯರ್ಥಿಗಳು ಈ ಮೇಲಿನ ಸರ್ಕಾರಿ ಆದೇಶದಂತೆ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಲಗತ್ತಿಸದೇ ಆನ್‌ಲೈನ್ ಅರ್ಜಿಯನ್ನು, Submit ಮಾಡಿದ್ದಲ್ಲಿ ಅಂತಹ ಅಭ್ಯರ್ಥಿಗಳಿಗೆ ನಿಯಮದಂತೆ ಜಾತಿ ಮತ್ತು ಆದಾಯ ಪ್ರಮಾಣ ಪತ್ರವನ್ನು ಹೊಸದಾಗಿ Upload ಮಾಡಲು Online ಅರ್ಜಿಯಲ್ಲಿ **Edit ಗೆ ಅವಕಾಶ ನೀಡಿದೆ** ಹಾಗೂ ಅರ್ಜಿ ಸಲ್ಲಿಸುವ **ಕೊನೆಯ ದಿನಾಂಕವನ್ನು ಸಹದಿನಾಂಕ:25/09/2026 ಹಾಗೂ ಪಾವತಿಸಿದ ಶುಲ್ಕ ಇತ್ಯರ್ಥಪಡಿಸಿಕೊಳ್ಳಲು ಕೊನೆಯ ದಿನಾಂಕ:28/09/2026ರವರೆಗೆ ವಿಸ್ತರಿಸಿದೆ.** ಅಭ್ಯರ್ಥಿಗಳು **Edit Option** ಅನ್ನು ಬಳಸಿಕೊಂಡು ನಿಯಮದಂತೆ ತಮ್ಮ ಜಾತಿ ಮತ್ತು ಆದಾಯ ಪ್ರಮಾಣ ಪತ್ರವನ್ನು ಲಗತ್ತಿಸಿ, ಅರ್ಜಿ ಸಲ್ಲಿಸುವುದು.
ಅಧಿಸೂಚನೆಯಲ್ಲಿ ಅಭ್ಯರ್ಥಿಗಳು ಆನ್‌ಲೈನ್ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕ:07/09/2026 ಹಾಗೂ ಶುಲ್ಕ ಪಾವತಿಸಿರುವ ಶುಲ್ಕವನ್ನು ಖಚಿತಪಡಿಸಿಕೊಳ್ಳಲು ನಿಗದಿಪಡಿಸಿದ ಕೊನೆಯ ದಿನಾಂಕ:10/09/2026 ಆಗಿರುತ್ತದೆ.	ಅಭ್ಯರ್ಥಿಗಳು ಶುಲ್ಕ ಪಾವತಿಸಿ **ಆನ್‌ಲೈನ್ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕ:25/09/2026 ಹಾಗೂ ಪಾವತಿಸಿದ ಶುಲ್ಕವನ್ನು ಇತ್ಯರ್ಥಪಡಿಸಿಕೊಳ್ಳಲು ನಿಗದಿಪಡಿಸಿದ ಕೊನೆಯ ದಿನಾಂಕ:28/09/2026**ಎಂದು ಓದಿಕೊಳ್ಳತಕ್ಕದ್ದು. ಅಧಿಸೂಚನೆಯಲ್ಲಿ ಸ್ಪಷ್ಟಪಡಿಸಿದಂತೆ ಅಭ್ಯರ್ಥಿಗಳು ಸಂಬಂಧಪಟ್ಟ ಎಲ್ಲಾ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗೆ ಪಡೆದಿರಬೇಕು ಹಾಗೂ ಅರ್ಜಿಯೊಂದಿಗೆ **Upload** ಮಾಡಿರಬೇಕು.
ಅಧಿಸೂಚನೆಯಲ್ಲಿ, ಪ್ರೌಢ ಶಾಲಾ ಸಹ ಶಿಕ್ಷಕರು ಕಲಾ (ಕನ್ನಡ ಮಾಧ್ಯಮ/ಆಂಗ್ಲ ಮಾಧ್ಯಮ) ವಿಷಯದ ಅಂಗವಿಕಲ ಮೀಸಲಾತಿಯ ಹುದ್ದೆಗಳಿಗೆ ಸಂಬಂಧಿಸಿದಿಂತೆ ಕೆಲವೊಂದು ಜಿಲ್ಲೆಗಳ ರೋಸ್ಟರ್ ಕೋಷ್ಟಕಗಳಡಿ PH-Low Vision ಅಭ್ಯರ್ಥಿಗಳಿಗೆ ಮೀಸಲಿರಿಸಿ, ಅಧಿಸೂಚಿಸಲಾಗಿದೆ.	ಅಧಿಸೂಚನೆಯಲ್ಲಿ, ಪ್ರೌಢ ಶಾಲಾ ಭಾಷಾ ಶಿಕ್ಷಕರು (ಕನ್ನಡ ಮತ್ತು ಆಂಗ್ಲ), ಮತ್ತು ಸಹ ಶಿಕ್ಷಕರು ಕಲಾ (ಕನ್ನಡ ಮಾಧ್ಯಮ/ಆಂಗ್ಲ ಮಾಧ್ಯಮ) ವಿಷಯಗಳ ಅಂಗವಿಕಲ ಮೀಸಲಾತಿಯ ಹುದ್ದೆಗಳಿಗೆ ಸಂಬಂಧಿಸಿದಿಂತೆ **PH- Low Vision** ಅಭ್ಯರ್ಥಿಗಳಿಗೆ ಮೀಸಲಿರಿಸುವುದನ್ನು ಮಾರ್ಪಡಿಸಿ, **PH-Blindness and Low Vision** ಎಂದು ಸೇರ್ಪಡೆಗೊಳಿಸಿದ್ದು, ಅದರಂತೆ ಓದಿಕೊಳ್ಳತಕ್ಕದ್ದು.
ಅಧಿಸೂಚನೆಯಲ್ಲಿ, ಪುಟಸಂಖ್ಯೆ: 05 & 06 ರ ಕಂಡಿಕೆ-09 (III ಮತ್ತು IV) ರಲ್ಲಿ ನೀಡಲಾದ :, ಪ್ರೌಢ ಶಾಲಾ ಸಹ ಶಿಕ್ಷಕರು ಕಲಾ (ಕನ್ನಡ ಮಾಧ್ಯಮ/ಆಂಗ್ಲ ಮಾಧ್ಯಮ) ಮತ್ತು ಜೀವಶಾಸ್ತ್ರ (ಕನ್ನಡ ಮಾಧ್ಯಮ/ಆಂಗ್ಲ ಮಾಧ್ಯಮ) ಹುದ್ದೆಗಳಿಗೆ ನಿಗದಿಪಡಿಸಿದ ವಿದ್ಯಾರ್ಹತೆಯ ಜೊತೆಗೆ ಹುದ್ದೆಯ ಮಾಧ್ಯಮಕ್ಕೆ ಸಂಬಂಧಿಸಿದಂತೆ ಅಧಿಸೂಚನೆಯಲ್ಲಿ ಈ ಕೆಳಕಂಡಂತಿರುತ್ತದೆ. **ಮೇಲಿನ ವಿದ್ಯಾರ್ಹತೆಗಳ ಜೊತೆಗೆ :-** a) ಯಾವ ಮಾಧ್ಯಮದಲ್ಲಿ ಪಾಠ ಬೋಧನೆ ಮಾಡುವರೋ ಆ ಭಾಷೆಯನ್ನು ಪದವಿ ಹಂತದಲ್ಲಿ ಅಭ್ಯಾಸಿಸಿರತಕ್ಕದ್ದು.	ಅಧಿಸೂಚನೆಯಲ್ಲಿ, ಪುಟಸಂಖ್ಯೆ: 06ರ ಕಂಡಿಕೆ-09 (III ಮತ್ತು IV) ರಲ್ಲಿ ನೀಡಲಾದ ಪ್ರೌಢ ಶಾಲಾ ಸಹ ಶಿಕ್ಷಕರು ಕಲಾ (ಕನ್ನಡ ಮಾಧ್ಯಮ/ಆಂಗ್ಲ ಮಾಧ್ಯಮ) ಮತ್ತು ಜೀವಶಾಸ್ತ್ರ(ಕನ್ನಡ ಮಾಧ್ಯಮ/ಆಂಗ್ಲ ಮಾಧ್ಯಮ) ಹುದ್ದೆಗಳ ವಿದ್ಯಾರ್ಹತೆಗೆ ಸಂಬಂಧಿಸಿದಂತೆ ಈ ಕೆಳಕಂಡಂತೆ ಸ್ಪಷ್ಟೀಕರಣ ನೀಡಿದ್ದು, ಅದರಂತೆ ಓದಿಕೊಳ್ಳತಕ್ಕದ್ದು. **ಮೇಲಿನ ವಿದ್ಯಾರ್ಹತೆಗಳ ಜೊತೆಗೆ :-** a) ಯಾವ ಮಾಧ್ಯಮದಲ್ಲಿ ಪಾಠ ಬೋಧನೆ ಮಾಡುವರೋ ಆ ಭಾಷೆಯನ್ನು ಪದವಿ ಹಂತದಲ್ಲಿ ಅಭ್ಯಾಸಿಸಿರತಕ್ಕದ್ದು. b) ಯಾವ ಅಭ್ಯರ್ಥಿಯು ಸದರಿ ಭಾಷೆಯನ್ನು ಪದವಿ ಹಂತದಲ್ಲಿ ವ್ಯಾಸಂಗ ಮಾಡಿರುವುದಿಲ್ಲವೊ ಅಂತಹ ಅಭ್ಯರ್ಥಿಯು: SSLCಯಲ್ಲಿ ಆ ಭಾಷೆಯನ್ನು ಪ್ರಥಮ ಅಥವಾ ದ್ವಿತೀಯ ಭಾಷೆಯನ್ನಾಗಿ ಪೂರೈಸಿರತಕ್ಕದ್ದು.

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297

b) ಯಾವ ಅಭ್ಯರ್ಥಿಯು ಸದರಿ ಭಾಷೆಯನ್ನು ಪದವಿ ಹಂತದಲ್ಲಿ ವ್ಯಾಸಂಗ ಮಾಡಿರುವುದಿಲ್ಲವೊ ಅಂತಹ ಅಭ್ಯರ್ಥಿಯು: SSLCಯಲ್ಲಿ ಆ ಭಾಷೆಯನ್ನು ಪ್ರಥಮ ಅಥವಾ ದ್ವಿತೀಯ ಭಾಷೆಯನ್ನಾಗಿ ಪೂರೈಸಿರತಕ್ಕದ್ದು. **ಅಥವಾ** UGC ಮಾನ್ಯತೆ ಹೊಂದಿರುವ ವಿಶ್ವವಿದ್ಯಾಲಯದಿಂದ ಆ ಭಾಷೆಯ ಡಿಪ್ಲೋಮಾ ಅರ್ಹತೆ ಹೊಂದಿರತಕ್ಕದ್ದು. **ಅಥವಾ** ಕನ್ನಡ ಭಾಷೆಯಲ್ಲಿ ಬೋಧಿಸಬೇಕಾದ ಶಿಕ್ಷಕರಾಗಿದ್ದಲ್ಲಿ ಕರ್ನಾಟಕ ರಾಜ್ಯ ಪರೀಕ್ಷಾ ಹಾಗೂ ಮೌಲ್ಯನಿರ್ಣಯ ಮಂಡಲಿಯಿಂದ ಅಥವಾ ಕನ್ನಡ ಸಾಹಿತ್ಯ ಪರಿಷತ್ ನಿಂದ ಕನ್ನಡ ಭಾಷಾ ಸರ್ಟಿಫಿಕೇಟ್ ಕೋರ್ಸ್‌ನ್ನು ಪೂರೈಸಿರತಕ್ಕದ್ದು.	**ಅಥವಾ** ಪದವಿ ಅಥವಾ ಎಸ್.ಎಸ್.ಎಲ್.ಸಿ ಹಂತದ ವ್ಯಾಸಂಗವನ್ನು ಆ ಮಾಧ್ಯಮದಲ್ಲಿ ಪೂರೈಸಿರತಕ್ಕದ್ದು. **ಅಥವಾ** UGC ಮಾನ್ಯತೆ ಹೊಂದಿರುವ ವಿಶ್ವವಿದ್ಯಾಲಯದಿಂದ ಆ ಭಾಷೆಯ ಡಿಪ್ಲೋಮಾ ಅರ್ಹತೆ ಹೊಂದಿರತಕ್ಕದ್ದು. **ಅಥವಾ** ಕನ್ನಡ ಭಾಷೆಯಲ್ಲಿ ಬೋಧಿಸಬೇಕಾದ ಶಿಕ್ಷಕರಾಗಿದ್ದಲ್ಲಿ ಕರ್ನಾಟಕ ರಾಜ್ಯ ಪರೀಕ್ಷಾ ಹಾಗೂ ಮೌಲ್ಯನಿರ್ಣಯ ಮಂಡಲಿಯಿಂದ ಅಥವಾ ಕನ್ನಡ ಸಾಹಿತ್ಯ ಪರಿಷತ್ ನಿಂದ ಕನ್ನಡ ಭಾಷಾ ಸರ್ಟಿಫಿಕೇಟ್ ಕೋರ್ಸ್‌ನ್ನು ಪೂರೈಸಿರತಕ್ಕದ್ದು.

ಸಹಿ/-
ಆಯ್ಕೆ ಪ್ರಾಧಿಕಾರಿ ಹಾಗೂ
ವಿಭಾಗೀಯ ಸಹನಿರ್ದೇಶಕರು,
ಬೆಳಗಾವಿ ವಿಭಾಗ, ಬೆಳಗಾವಿ.

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

P S BASAVARAJU